# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಶ್ರೀ ಶರಣಪ್ಪ ನರೇಗಲ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹುಲ್ಲೂರು ಗ್ರಾಮ ಪಂಚಾಯತಿ, ರೋಣ ತಾಲ್ಲೂಕು, ಗದಗ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**<u>ಓದಲಾಗಿದೆ:</u>**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM-517/2015/ARLO1, ದಿನಾಂಕ:08.03.2017
2) ಮಾನ್ಯ ಉಪಲೋಕಾಯುಕ್ತ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ವರದಿ ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಜಿಎಂ/517/2015/ಸನಿಕಾಸ-1, ದಿನಾಂಕ 09.02.2017

**<u>ಪ್ರಸ್ತಾವನೆ:</u>**

ಮೇಲೆ ಓದಲಾದ (1) ರಲ್ಲಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 09.02.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಪಡಿಯಪ್ಪ ಹನಮಪ್ಪ ಪೂಜಾರ, ಡಾ॥ ಅಂಬೇಡ್ಕರ್ ನಗರ, ಹುಲ್ಲೂರು ಗ್ರಾಮ, ರೋಣ ತಾಲ್ಲೂಕು, ಗದಗ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಿ, ಹುಲ್ಲೂರು ಗ್ರಾಮ ಪಂಚಾಯತಿಯಲ್ಲಿ 2009 ರಿಂದ 2014 ರವರೆಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, 13 ನೇ ಹಣಕಾಸು ಯೋಜನೆ ಹಾಗೂ ಕರ ವಸೂಲಾತಿ ಹಣವನ್ನು ದುರುಪಯೋಗಪಡಿಸಿಕೊಂಡಿರುವುದಾಗಿ ದೂರು ಸಲ್ಲಿಸಿದ್ದು, ಈ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984 ರ ಕಲಂ 9 ರಡಿ ಪ್ರದತ್ತವಾದ ಅಧಿಕಾರದಡಿ ತನಿಖೆ ಕೈಗೊಳ್ಳಲಾಗಿದೆ.

ಈ ಬಗ್ಗೆ ಎದುರುದಾರರಾದ ಶ್ರೀ ಶರಣಪ್ಪ ನರೇಗಲ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹುಲ್ಲೂರು ಗ್ರಾಮ ಪಂಚಾಯತಿ, ರೋಣ ತಾಲ್ಲೂಕು, ಗದಗ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರಿಂದ ಆಕ್ಷೇಪಣೆಗಳನ್ನು ಕೇಳಲಾಗಿ, ಎದುರುದಾರರು ಸಲ್ಲಿಸಿರುವ ಆಕ್ಷೇಪಣೆಗಳನ್ನು, ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಎದುರುದಾರರ ವಿರುದ್ಧದ ನಡವಳಿಗಳನ್ನು ಕೈಬಿಡಲು ಸೂಕ್ತ, ಸಮಂಜಸ, ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡು ಬಂದಿದ್ದು, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವೆ(ನಡತೆ) ನಿಯಮ 1966 ರ ನಿಯಮಗಳು 3(1) ರನ್ವಯ ಇಲಾಖಾ ಶಿಸ್ತು ಕ್ರಮ ಜರುಗಿಸಲು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(3) ರಡಿ ಪ್ರದತ್ತವಾದ ಅಧಿಕಾರದಡಿ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಲಾಗುತ್ತಿದ್ದು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14(ಎ) ರಡಿ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಎದುರುದಾರರಾದ ಶ್ರೀ ಶರಣಪ್ಪ ನರೇಗಲ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹುಲ್ಲೂರು ಗ್ರಾಮ ಪಂಚಾಯತಿ, ರೋಣ ತಾಲ್ಲೂಕು, ಗದಗ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 231 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 31.03.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಶರಣಪ್ಪ ನರೇಗಲ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹುಲ್ಲೂರು ಗ್ರಾಮ ಪಂಚಾಯತಿ, ರೋಣ ತಾಲ್ಲೂಕು, ಗದಗ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ–1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   **(ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)**
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಗದಗ ಜಿಲ್ಲಾ ಪಂಚಾಯತಿ, ಗದಗ.
5) ಕಾರ್ಯನಿರ್ವಾಹಕ ಅಧಿಕಾರಿ, ರೋಣ ತಾಲ್ಲೂಕು ಪಂಚಾಯತಿ, ರೋಣ, ಗದಗ ಜಿಲ್ಲೆ.
   (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಲು ಅಗತ್ಯ ಕ್ರಮವಹಿಸುವುದು.)
6) ಶ್ರೀ ಶರಣಪ್ಪ ನರೇಗಲ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹುಲ್ಲೂರು ಗ್ರಾಮ ಪಂಚಾಯತಿ, ರೋಣ ತಾಲ್ಲೂಕು, ಗದಗ ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.